Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

07.01.2025 18.40 hrs

<><*<><>*><>

<u>ಮುಖ್ಯಾಂಶಗಳು</u>

- **ಸರ್ಕಾರದ ಅನುದಾನ ಸದುಪಯೋಗಪಡಿಸಿಕೊಳ್ಳುವಂತೆ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ**
- **ಮಾರ್ಕಂಡೇಯ ನದಿ ನೀರು ವಿವಾದ ; ತಮಿಳುನಾಡು ಜೊತೆ ಸರ್ಕಾರದ ಮಟ್ಟದಲ್ಲೇ ಬಗೆಹರಿಸಲು ಪ್ರಯತ್ನ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್**
- **ಧರ್ಮಸ್ಥಳದಲ್ಲಿ 'ಸಾನಿಧ್ಯ' ನೂತನ ಸಂಕೀರ್ಣ ಲೋಕಾರ್ಪಣೆಗೊಳಿಸಿದ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್**
- **ಕಾವೇರಿ ಕೈಮಗ್ಗ ನಿಗಮಕ್ಕೆ ಆಯವ್ಯಯದಲ್ಲಿ ಅಗತ್ಯ ಅನುದಾನ - ಜವಳಿ ಸಚಿವ ಶಿವಾನಂದ ಪಾಟೀಲ್ ಭರವಸೆ**
- **ಸಂಕ್ರಾಂತಿ ಹಬ್ಬದ ಹಿನ್ನೆಲೆ ; ನೈಋುತ್ಯ ರೈಲ್ವೆಯಿಂದ ಬೆಂಗಳೂರಿನಿಂದ ತಮಿಳುನಾಡಿಗೆ ತ್ವರಿತಗತಿ ರೈಲು ಸೇವೆ**

<><*<><>*><>

ಸರ್ಕಾರ ಕೊಟ್ಟ ಹಣವನ್ನು ಖರ್ಚು ಮಾಡದೆ ವರ್ಷದ ಕೊನೆ ತಿಂಗಳಲ್ಲಿ ಖರ್ಚು ಮಾಡುವ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಗೃಹ ಕಚೇರಿ ಕೃಷ್ಣದಲ್ಲಿ ಇಂದು ನಡೆದ ಸಮಾಜ ಕಲ್ಯಾಣ ಇಲಾಖೆಯ ಪ್ರಗತಿ ಪರಿಶೀಲಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಬಡವರ ಹಾಗೂ ಅರ್ಹ ಫಲಾನುಭವಿಗಳ ಹಣವನ್ನು ಸದುಪಯೋಗ ಪಡಿಸಿಕೊಳ್ಳುವಂತೆ ತಿಳಿಸಿದ್ದಾರೆ. ಪ್ರಸಕ್ತ ಸಾಲಿನಲ್ಲಿ ಆಯವ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ೫ ಸಾವಿರದ ೩೭೭ ಕೋಟಿ ರೂಪಾಯಿ ಅನುದಾನ ಒದಗಿಸಲಾಗಿದೆ. ಇದುವರೆಗೆ ಅನುದಾನ ೩ ಸಾವಿರದ ೭೩೧ ಕೋಟಿ ರೂಪಾಯಿ ಬಿಡುಗಡೆಯಾಗಿದೆ. ಈ ಹಣ ಕೂಡ ಪೂರ್ತಿ ಖರ್ಚು ಮಾಡದ ಬಗ್ಗೆ ಮುಖ್ಯಮಂತ್ರಿ ಪ್ರಶ್ನಿಸಿದ್ದಾರೆ. ಜೊತೆಗೆ ಅಂಬೇಡ್ಕರ್ ನಿಗಮದಲ್ಲಿ ೯೦೦ ಕೋಟಿ, ಭೋವಿ ನಿಗಮದಲ್ಲಿ ೧೦೭ ಕೋಟಿ ಸೇರಿ ಎಲ್ಲಾ ನಿಗಮಗಳಲ್ಲಿ ನೂರಾರು ಕೋಟಿ ಹಣ ಇದ್ದರೂ ಖರ್ಚು ಮಾಡದ ನಿಗಮದ ಎಂಡಿ ಗಳಿಗೆ ನೋಟಿಸ್ ನೀಡಿ, ಅಗತ್ಯ ಬಿದ್ದರೆ ಸಸ್ಪೆಂಡ್ ಮಾಡುವಂತೆ ಖಡಕ್ ಸೂಚನೆ

ನೀಡಿದ್ದಾರೆ. ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಎಂದು ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಸೂಚಿಸಿದ್ದಾರೆ.

<><*<><>*><>

ಭದ್ರಾ ಮೇಲ್ದಂಡೆ ಯೋಜನೆಗೆ ಘೋಷಣೆ ಮಾಡಿದ್ದ ೫ ಸಾವಿರದ ೩೦೦ ಕೋಟಿ ಅನುದಾನ ಬಿಡುಗಡೆ ಸೇರಿದಂತೆ ಮಾರ್ಕಂಡೇಯ ನದಿಗೆ ಅಣೆಕಟ್ಟು ನಿರ್ಮಾಣಕ್ಕೆ ತಮಿಳುನಾಡು ಎತ್ತಿರುವ ತಕರಾರಿನ ಕುರಿತು ಕೇಂದ್ರ ಸಚಿವ ವಿ.ಸೋಮಣ್ಣ ಅವರ ಜತೆ ಚರ್ಚೆ ನಡೆಸಲಾಯಿತು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಮಾತನಾಡಿದ ಅವರು, ತಮಿಳುನಾಡು ಪೆನ್ನಾರ್ ನದಿ ನೀರಿನ ವಿಚಾರವಾಗಿ ಜನವರಿ ೧ರಂದು ಅಫಿಡವಿಟ್ ಸಲ್ಲಿಸಿದೆ. ಎರಡು ರಾಜ್ಯಗಳ ಪ್ರತಿನಿಧಿಗಳನ್ನು ಸೇರಿಸಿ ಮಾತುಕತೆ ನಡೆಸಬೇಕಿರುವ ಕಾರಣಕ್ಕೆ ಶೀಘ್ರದಲ್ಲೇ ಸಭೆಗೆ ಒಂದು ದಿನಾಂಕ ಅಂತಿಮಗೊಳಿಸುವುದಾಗಿ ಹೇಳಿದ್ದಾರೆ. ಪೆನ್ನಾರ್ ನದಿ ನೀರಿನ ವಿವಾದ ಕುರಿತು ನ್ಯಾಯಾಧೀಕರಣದ ಮೂಲಕ ಹೋದರೆ ತಡವಾಗಲಿದೆ. ಕೋರ್ಟ್ ಮತ್ತು ವಕೀಲರ ವೆಚ್ಚವೂ ದುಬಾರಿಯಾಗಲಿದೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಮಟ್ಟದಲ್ಲೇ ಬಗೆಹರಿಸಿಕೊಳ್ಳಲು ಪ್ರಯತ್ನಿಸುವುದಾಗಿ ತಿಳಿಸಿದ್ದಾರೆ.

<><*<><>*><>

ದೇಶದಲ್ಲಿ ಸೌಹಾರ್ದತೆಯ ವಾತಾವರಣ ನಿರ್ಮಾಣಕ್ಕೆ ಪ್ರತಿಯೊಬ್ಬ ಪ್ರಜೆಯೂ ಒತ್ತು ನೀಡಬೇಕು ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಕರೆ ನೀಡಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳದಲ್ಲಿಂದು ನೂತನ ಸಂಕೀರ್ಣ 'ಶ್ರೀ ಸಾನಿಧ್ಯ' ಉದ್ಘಾಟನೆ ಹಾಗೂ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ 'ಜ್ಞಾನದೀಪ ಕಾರ್ಯಕ್ರಮಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಭಾರತದಲ್ಲಿ ಸಂವಿಧಾನವೇ ಪರಮೋಚ್ಛವಾಗಿದ್ದು, ಜನರ ಮತಕ್ಕೆ ಬೆಲೆ ಇದ್ದರೆ ಮಾತ್ರ ಸಶಕ್ತ ಪ್ರಜಾಪ್ರಭುತ್ವ ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ. ಪ್ರಜಾಪ್ರಭುತ್ವ ನಮಗೆ ಎಲ್ಲಾ ರೀತಿಯ ಸ್ವಾತಂತ್ರ್ಯವನ್ನು ನೀಡಿದ್ದು, ನಮ್ಮ ದೇಶದ ನಾಗರಿಕತೆ ಬಲಿಷ್ಠವಾಗಿರಲು ಇಲ್ಲಿನ ಮೂಲ ವ್ಯವಸ್ಥೆಯೇ ಕಾರಣ ಎಂದು ಹೇಳಿದರು. ಧರ್ಮಸ್ಥಳದ ಅಭಿವೃದ್ಧಿ ಕಾರ್ಯಗಳು ನಾಡಿಗೆ ಮಾದರಿಯಾಗಿದೆ. ಇದೀಗ ಅತ್ಯಾಧುನಿಕ ವ್ಯವಸ್ಥೆಯ ಕ್ಯೂ ಕಾಂಪ್ಲೆಕ್ಸ್ ನಿರ್ಮಾಣದಿಂದ ಭಕ್ತರಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

<><*<><>*><>

ರಾಜ್ಯಸಭಾ ಸದಸ್ಯ, ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.

<><*<><>*><>

ಕಾವೇರಿ ಹ್ಯಾಂಡ್‌ಲೂಮ್ಸ್‌ನ ಗತವೈಭವವನ್ನು ಮರಳಿ ತರಬೇಕಿದ್ದು, ಬಜೆಟ್‌ನಲ್ಲಿ ಅಗತ್ಯ ಅನುದಾನ ಒದಗಿಸಲು ಪ್ರಯತ್ನಿಸಲಾಗುವುದು ಎಂದು ಜವಳಿ ಸಚಿವ ಶಿವಾನಂದ ಪಾಟೀಲ್ ಭರವಸೆ ನೀಡಿದ್ದಾರೆ.

ಕೇಂದ್ರ ಸರ್ಕಾರದ ಜವಳಿ ಸಚಿವಾಲಯದ ನೆರವಿನೊಂದಿಗೆ ಕಾವೇರಿ ಹ್ಯಾಂಡ್‌ಲೂಮ್ಸ್ ಆಯೋಜಿಸಿರುವ ೧೫ ದಿನಗಳ ಗಾಂಧಿ ಹ್ಯಾಂಡ್‌ಲೂಮ್ ಮೇಳ ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕಾವೇರಿ ಹ್ಯಾಂಡ್‌ಲೂಮ್ಸ್ ಮಾರಾಟ ಮಳಿಗೆ ಆರಂಭಿಸಲು ಸಹಕಾರ ನೀಡಲಾಗುವುದು ಎಂದು ತಿಳಿಸಿದ್ದಾರೆ. ವಿದ್ಯುತ್‌ಮಗ್ಗ ನೇಕಾರಿಕೆ ಪ್ರೋತ್ಸಾಹಿಸಲು ಪ್ರಣಾಳಿಕೆಯಲ್ಲಿ ಭರವಸೆ ನೀಡಿದಂತೆ ಒಂದರಿಂದ ಹತ್ತು ಅಶ್ವಶಕ್ತಿವರೆಗೆ ಉಚಿತವಾಗಿ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

<><*<><>*><>

ಕಳೆದ ಹಲವಾರು ವರ್ಷಗಳಿಂದ ನಕ್ಸಲ್ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿದ್ದ ಸುಮಾರು ೬ ಮಂದಿ ನಕ್ಸಲರು ನಾಳೆ ಚಿಕ್ಕಮಗಳೂರಿನಲ್ಲಿ ಸಮಾಜದ ಮುಖ್ಯವಾಹಿಗೆ ಮರಳಲಿದ್ದಾರೆ. ನಕ್ಸಲ್ ಪುನರ್ವಸತಿ ಸಮಿತಿ ಈ ವಿಚಾರವನ್ನು ಖಚಿತ ಪಡಿಸಿದೆ. ಷರತ್ತಿನ ಮೇರೆಗೆ ನಕ್ಸಲರಾದ ಮುಂಡಗಾರು ಲತಾ, ವನಜಾಕ್ಷಿ, ಸುಂದರಿ, ಕೇರಳದ ಜೀಷ, ಆಂದ್ರ ಪ್ರದೇಶದ ಮಾರೆಪ್ಪ ಆರೋಲಿ, ತಮಿಳುನಾಡಿನ ವಸಂತ್ ಈ ೬ ಮಂದಿ ಒಮ್ಮತದಿಂದ ಶರಣಾಗತಿಯಾಗಲಿದ್ದಾರೆ. ನಾಳೆ ಚಿಕ್ಕಮಗಳೂರು ಜಿಲ್ಲಾಧಿಕಾರಿ ಕಚೇರಿಯಲ್ಲಿ ಜಿಲಾಧಿಕಾರಿ ಹಾಗೂ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳ ಸಮ್ಮುಖದಲ್ಲಿ ಶರಣಾಗತಿಯ ಮುಖ್ಯ ಪ್ರಕ್ರಿಯೆಗಳು ನಡೆಯಲಿದೆ.

<><*<><>*><>

ಪೊಂಗಲ್ ಹಬ್ಬದ ಸಂದರ್ಭದಲ್ಲಿ ಹೆಚ್ಚಿನ ಪ್ರಯಾಣಿಕರ ದಟ್ಟಣೆಯನ್ನು ನಿರ್ವಹಿಸಲು ನೈಋತ್ಯ ರೈಲ್ವೆ ಕೆಎಸ್‌ಆರ್ ಬೆಂಗಳೂರಿನಿಂದ ಡಾ. ಎಂಜಿಆರ್ ಚೆನ್ನೈ ಸೆಂಟ್ರಲ್, ಎಸ್‌ಎಂವಿಟಿ ಬೆಂಗಳೂರಿನಿಂದ - ಟುಟಿಕೋರಿನ್-ಮೈಸೂರು ನಿಲ್ದಾಣಗಳ ನಡುವೆ ವಿಶೇಷ ಎಕ್ಸ್ ಪ್ರೆಸ್ ರೈಲುಗಳನ್ನು ಓಡಿಸಲು ನಿರ್ಧರಿಸಿದೆ. ಕೆಎಸ್‌ಆರ್ ಬೆಂಗಳೂರು- ಚೆನ್ನೈ ಸೆಂಟ್ರಲ್ ವಿಶೇಷ ಎಕ್ಸ್ ಪ್ರೆಸ್ ರೈಲು ಇದೇ ೧೦ ರಂದು ಬೆಳಿಗ್ಗೆ ೮ ಗಂಟೆ ೫ ನಿಮಿಷಕ್ಕೆ ಕೆಎಸ್‌ಆರ್ ಬೆಂಗಳೂರಿನಿಂದ ಹೊರಟು, ಮಧ್ಯಾಹ್ನ ೨ ಗಂಟೆ ೪೦ ನಿಮಿಷಕ್ಕೆ ಡಾ.ಎಂಜಿಆರ್ ಚೆನ್ನೈ ಸೆಂಟ್ರಲ್ ತಲುಪಲಿದೆ. ಬೆಂಗಳೂರು-ಟುಟಿಕೋರಿನ್ ವಿಶೇಷ ಎಕ್ಸ್ ಪ್ರೆಸ್ ರೈಲು ಇದೇ ೧೦ ರಂದು ರಾತ್ರಿ ೧೦ ಗಂಟೆಗೆ ಬೆಂಗಳೂರಿನಿಂದ ಹೊರಟು, ೧೧ ರಂದು ಬೆಳಿಗ್ಗೆ ೧೧ ಗಂಟೆಗೆ ಟ್ಯುಟಿಕೋರಿನ್ ತಲುಪಲಿದೆ. ಹೆಚ್ಚಿನ ಮಾಹಿತಿಗಾಗಿ ಪ್ರಯಾಣಿಕರು ಭಾರತೀಯ ರೈಲ್ವೆ ಜಾಲತಾಣ eಟಿquiಡಿಥಿ.iಟಿಜiಚಿಟಿಡಿಚಿiಟ.gov.iಟಿ ಗೆ ಭೇಟಿ ನೀಡಬಹುದು.

<><*<><>*><>

ಹೈಕೋರ್ಟ್ ಆದೇಶದಂತೆ ಇದೇ ೧೫ರಂದು ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಜಿನಗಲಕುಂಟೆ ಅರಣ್ಯ ಭೂಮಿಯ ಜಂಟಿ ಸರ್ವೆಗೆ ಎಲ್ಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ. ಸರ್ವೆ ವೇಳೆ ಹಾಜರಾಗುವಂತೆ ಮಾಜಿ ಸ್ಪೀಕರ್

ರಮೇಶ್‌ಕುಮಾರ್ ಅವರಿಗೆ ಖುದ್ದಾಗಿ ನೋಟೀಸ್ ಜಾರಿ ಮಾಡಲಾಗಿದೆ ಎಂದು ಹೇಳಿದ್ದಾರೆ. ಹೈಕೋರ್ಟ್ ನೀಡಿರುವ ೨೦೧೦, ೨೦೧೩ ಮತ್ತು ೨೦೨೪ರ ಆದೇಶದ ಪ್ರಕಾರ ಜಂಟಿ ಸರ್ವೆ ನಡೆಯಲಿದೆ. ಜನವರಿ ೧೫ರಂದೇ ಸರ್ವೆ ನಡೆಸಲು ನ್ಯಾಯಾಲಯವೇ ದಿನಾಂಕ ನಿಗದಿಪಡಿಸಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

<><*<><>*><>

ಡಾ. ಬಿ.ಆರ್ ಅಂಬೇಡ್ಕರ್ ಹೆಸರಿನ ಮೂಲಕ ಪರಿಶಿಷ್ಟರ ಮತ ಪಡೆಯಲು ಕಾಂಗ್ರೆಸ್ ಪ್ರಯತ್ನಿಸುತ್ತಿದೆ ಎಂದು ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹುಬ್ಬಳ್ಳಿ-ಧಾರವಾಡ ಬಂದ್ ಕರೆಯನ್ನು ಕೂಡಲೇ ವಾಪಸ್ ಪಡೆಯಬೇಕು. ಅವಳಿನಗರ ಬಂದ್ ವಾಪಸ್ ಪಡೆಯದೇ ಹೋದಲ್ಲಿ ಅದಕ್ಕೆ ಪ್ರತಿಯಾಗಿ ಬಿಜೆಪಿಯಿಂದ ಬಂದ್ ಕರೆ ನೀಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

<><*<><>*><>

ಕ್ರೀಡಾಕೂಟವು ತಮ್ಮಲ್ಲಿ ಸುಪ್ತವಾಗಿ ಅಡಗಿರುವ ಪ್ರತಿಭೆಯನ್ನು ಹೊರತರಲು ವಿದ್ಯಾರ್ಥಿಗಳಿಗೆ ವೇದಿಕೆಯಾಗಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಮಂಗಳೂರಿನ ಮಂಗಳಾ ಕ್ರೀಡಾಂಗಣದಲ್ಲಿಂದು ಕರ್ನಾಟಕ ಪಾಲಿಟೆಕ್ನಿಕ್ ನ ಅಮೃತ ಮಹೋತ್ಸವ ಸಂಭ್ರಮಾಚರಣೆ ಅಂಗವಾಗಿ ೪೫ನೇ ರಾಜ್ಯಮಟ್ಟದ ಅಂತರ್ ಪಾಲಿಟೆಕ್ನಿಕ್ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕ್ರೀಡಾಕೂಟಗಳಲ್ಲಿ ಸೋಲು ಗೆಲುವು ಸಾಮಾನ್ಯ ಎಂದು ಹೇಳಿದರು. ರಾಜ್ಯದ ಅತ್ಯುತ್ತಮ ಪಾಲಿಟೆಕ್ನಿಕ್ ಗಳಲ್ಲಿ ಕರ್ನಾಟಕ ಪಾಲಿಟೆಕ್ನಿಕ್ ಒಂದಾಗಿದ್ದು, ಎಐಸಿಟಿಇಯಿಂದ ಸ್ವಾಯತ್ತತೆ ಪಡೆದ ಮೊದಲ ಸರ್ಕಾರಿ ಪಾಲಿಟೆಕ್ನಿಕ್ ಎನ್ನುವುದು ಹೆಮ್ಮೆಯ ವಿಚಾರ ಎಂದು ಶ್ಲಾಘಿಸಿದರು.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧.ಮಂಡ್ಯ ಜಿಲ್ಲೆಯ ಮೇಲುಕೋಟೆಯಲ್ಲಿ ನೂತನ ನಾಡ ಕಚೇರಿ ಕಟ್ಟಡದ ಉದ್ಘಾಟನೆಯನ್ನು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಮತ್ತು ಮೇಲುಕೋಟೆ ವಿಧಾನಸಭಾ ಕ್ಷೇತ್ರದ ಶಾಸಕ ದರ್ಶನ್ ಪುಟ್ಟಣ್ಣಯ್ಯ ನೆರವೇರಿಸಿದರು.

೨.ದೌರ್ಜನ್ಯಕ್ಕೊಳಗಾದ ಮಹಿಳೆಯರಿಗೆ ಮತ್ತು ಮಕ್ಕಳಿಗೆ ಅಪ್ತ ಸಮಾಲೋಚನೆ ಜೊತೆಗೆ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಬೇಕೆಂದು ದಾವಣಗೆರೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ.ಎನ್ ಹೆಗಡೆ ತಿಳಿಸಿದ್ದಾರೆ.

೩.ಸರ್ಕಾರದ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ವಿಕಲಚೇತನರ ಅನುಕೂಲಕ್ಕಾಗಿ ಶೇಕಡ ೫ ರಷ್ಟು ಅನುದಾನ ಕಾಯ್ದಿರಿಸಿ, ಅವಶ್ಯಕ ಸೌಲಭ್ಯಗಳನ್ನು ಕಲ್ಪಿಸುವಂತೆ ಯಾದಗಿರಿ ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶರಾದ ಮರಿಯಪ್ಪ ಅಧಿಕಾರಿಗಳಿಗೆ ಸಲಹೆ ನೀಡಿದ್ದಾರೆ.

೪.ಯಾದಗಿರಿ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ವಿಕಲಚೇತನರ ಹಕ್ಕುಗಳ ಕಾಯ್ದೆ ೨೦೧೬ರ ಕುರಿತ ಒಂದು ದಿನದ ಕಾರ್ಯಾಗಾರ ನಡೆಯಿತು. ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ ಒರಡಿಯಾ "ನಿರಾಮಯ" ಆರೋಗ್ಯ ವಿಮೆ ಕಾರ್ಡ್ ವಿತರಿಸಿದರು.

೫.ಗ್ರಾಹಕರು ತಮ್ಮ ಹಕ್ಕಿನ ಬಗ್ಗೆ ತಿಳಿಯಲು ಜಾಗೃತರಾಗಿರುವಂತೆ ಕಲಬುರಗಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಪ್ರಭಾರಿ ಅಧ್ಯಕ್ಷ ಎಂ. ಲೋಕೇಶ್ ತಿಳಿಸಿದ್ದಾರೆ.

೬.ಬಳ್ಳಾರಿ ಜಿಲ್ಲೆಯಲ್ಲಿ ಕಳೆದ ಜನವರಿಯಿಂದ ನವೆಂಬರ್‌ವರೆಗೆ ೩೪೯ ವಿವಿಧ ಕಳ್ಳತನ ಪ್ರಕರಣ ದಾಖಲಾಗಿದ್ದು. ಇವುಗಳಲ್ಲಿ ೧೦೬ ಪ್ರಕರಣ ಪತ್ತೆಹಚ್ಚಿ ೮೩ ಜನರನ್ನು ಬಂಧಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**